ವಿಷಯ: ಆರಾಧನಾ ಸಮಿತಿ ಸದಸ್ಯರ ಭತ್ಯೆ.

1106 (1631)

ಶ್ರೀ ಯು.ಬಿ.ಬಣಕಾರ್ (ಹಿರೇಕೆರೂರು): ಮಾನ್ಯ ಮುಜರಾಯಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆರಾಧನ ಸಮಿತಿ ನಾಮಕರಣ ಸದಸ್ಯರಿಗೆ ಭತ್ಯೆ ನೀಡಲಾಗುತ್ತಿದೆಯೇ? (ವಿವರ ನೀಡುವುದು)

ಆ) ಅವರಿಗೆ ಭತ್ಯೆ ಕೊಡಲು ಸರ್ಕಾರವು ಯಾವ ಕ್ರಮ ತೆಗೆದುಕೊಳ್ಳಲಾಗಿದೆ?

ಶ್ರೀ ಬಿ.ಮುನಿಯಪ್ಪ (ಮುಜರಾಯಿ ಸಚಿವರು):

ಅ) ಇಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ವಿಷಯ: ಪಶು ವೈದ್ಯಕೀಯ ಕಾಲೇಜಿನಲ್ಲಿ ಸ್ಥಳೀಯರಿಗೆ ಆದ್ಯತೆ.

1107 (1290)

ಶ್ರೀ ಬಸವರಾಜ ಪಾಟೀಲ ಅಟ್ಟೂರ (ಬಸವಕಲ್ಯಾಣ): ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದಿರನ ಪಶುವೈದ್ಯ ಕಾಲೇಜಿನಲ್ಲಿ ಇರತಕ್ಕ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು?

ಆ) ಈ ಕಾಲೇಜಿನಲ್ಲಿ ಬೀದರ್ ಜಿಲ್ಲೆಯ ವಿದ್ಯಾರ್ಥಿಗಳಿಗೆ ಮೀಸಲಾಗಿಟ್ಟಿರುವ ಸೀಟುಗಳು ಎಷ್ಟು?

ಶ್ರೀ ಸಿ.ಬೈರೇಗೌಡ (ಕೃಷಿ ಸಚಿವರು):

ಅ) 203 (ಪದವಿ ಮತ್ತು ಸ್ನಾತಕೋತ್ತರ ಪದವಿ ಸೇರಿ)

ಆ) ಜಿಲ್ಲಾವಾರು ಮೀಸಲಾತಿಗೆ ಅವಕಾಶವಿರುವುದಿಲ್ಲ.

ವಿಷಯ: ಪಶುವೈದ್ಯಕೀಯ ಕಾಲೇಜಿಗೆ ಕಟ್ಟಡ.

1108 (1289)

ಶ್ರೀ ಬಸವರಾಜ ಪಾಟೀಲ ಅಟ್ಟೂರ (ಬಸವಕಲ್ಯಾಣ): ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರಿನಲ್ಲಿ ಪಶುವೈದ್ಯಕೀಯ ಕಾಲೇಜನ್ನು ಯಾವಾಗ ಪ್ರಾರಂಭಿಸಲಾಯಿತು?

ಆ) ಈ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು?

ಇ) ಈ ಕಾಲೇಜಿಗೆ ಹೊಸ ಕಟ್ಟಡವನ್ನು ನಿರ್ಮಿಸಲು ತಗಲುವ ಅಂದಾಜು ವೆಚ್ಚ ಎಷ್ಟು?

ಈ) ಇದಕ್ಕಾಗಿ ಸರ್ಕಾರವು ಪ್ರಸಕ್ತ ಸಾಲಿನಲ್ಲಿ ಬಿಡುಗಡೆ ಮಾಡಿರುವ ಹಣವೆಷ್ಟು?

ಶ್ರೀ ಸಿ.ಬೈರೇಗೌಡ (ಕೃಷಿ ಸಚಿವರು):

ಅ) ಪಶುವೈದ್ಯಕೀಯ ಮಹಾವಿದ್ಯಾಲಯವನ್ನು 1984ರಲ್ಲಿ ಬೀದರ್‌ನಲ್ಲಿ ಪ್ರಾರಂಭಿಸಲಾಯಿತು.

ಆ) 203 ವಿದ್ಯಾರ್ಥಿಗಳು. (ಪದವಿ ಮತ್ತು ಸ್ನಾತಕೋತ್ತರ ಪದವಿ ಸೇರಿ)

ಇ) ಬೀದರಿನ ಪಶುವೈದ್ಯಕೀಯ ಕಾಲೇಜಿನ ಹೊಸ ಕಟ್ಟಡ ನಿರ್ಮಿಸಲು ಅಂದಾಜು ವೆಚ್ಚ ರೂ.77,87,647-00 ಇರುತ್ತದೆ.

ಈ) ಕಟ್ಟಡ ನಿರ್ಮಾಣಕ್ಕಾಗಿ ಸರ್ಕಾರದಿಂದ ಪ್ರತ್ಯೇಕವಾಗಿ ಹಣ ಬಿಡುಗಡೆ ಮಾಡುವುದಿಲ್ಲ. 98-99ನೇ ಸಾಲಿನಲ್ಲಿ ಕೃವಿವಿ ಧಾರವಾಡಕ್ಕೆ ಯೋಜನೆಯ ಅಡಿಯಲ್ಲಿ ರೂ.830.00 ಲಕ್ಷ ಶಿಕ್ಷಣಕ್ಕಾಗಿ ಹಾಗೂ ರೂ.430.00 ಲಕ್ಷ ಕೃಷಿ ಸಂಶೋಧನೆಗಾಗಿ ಒಟ್ಟು ರೂ.1260.00 ಲಕ್ಷಗಳ ಅನುದಾನ ನಿಗಧಿಪಡಿಸಲಾಗಿದ್ದು, ಹೊಸ ಕಟ್ಟಡ ನಿರ್ಮಾಣಕ್ಕಾಗಿ ರೂ.10.00 ಲಕ್ಷಗಳನ್ನು ಕೃವಿವಿದ ವಾರ್ಷಿಕ ಕಾಮಗಾರಿ ಕಾರ್ಯಕ್ರಮದಲ್ಲಿ ನಿಗಧಿಪಡಿಸಿದೆ.

ವಿಷಯ: ತೋಟಗಾರಿಕೆ ಬೆಳೆಗಳ ಖರೀದಿ.

1109 (1637)

ಶ್ರೀ ಚಂದ್ರಕಾಂತ ಬೆಲ್ಲದ (ಧಾರವಾಡ): ಮಾನ್ಯ ತೋಟಗಾರಿಕೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಬೆಲೆ ಮಾರುಕಟ್ಟೆಯಲ್ಲಿ ಕಡಿಮೆ ಆದ ಕಾರಣ ರೈತರ ಬೆಳೆಗಳನ್ನು ಖರೀದಿಸಲಾಗಿದೆಯೇ ಮತ್ತು ಯಾವ ಬೆಲೆಗೆ ಯಾವ ಕೃಷಿ ತೋಟಗಾರಿಕೆ